# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:21ನೇ ಮಾರ್ಚ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

***

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 15ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಆಯನೂರು ಮಂಜುನಾಥ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 216 (1781) | ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು |
| 18ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 260 (2014) | ಮಾನ್ಯ ಅರಣ್ಯ, ಆಹಾರ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತನೆಯ ಪಟ್ಟಿ

## 02. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಯು.ಬಿ. ವೆಂಕಟೇಶ್** ಅವರು ಹೈದ್ರಾಬಾದ್-ಕರ್ನಾಟಕ ಭಾಗದ ಸರ್ಕಾರದ ಎಲ್ಲಾ ಇಲಾಖೆಗಳ ಉದ್ಯೋಗದಲ್ಲಿ ಮೀಸಲಾತಿ ಪ್ರಮಾಣ ಶೇ.100ಕ್ಕೆ 100ರಷ್ಟು ಹಾಗೂ ಉಳಿದ ಜಿಲ್ಲೆಗಳಲ್ಲಿ ಶೇ. 8ರಷ್ಟು ಅನುಷ್ಠಾನಕ್ಕೆ ತರುವಲ್ಲಿ ವಿಳಂಬ ಧೋರಣೆ ತಾಳಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀ ಮುನಿರಾಜು ಗೌಡ ಪಿ.ಎಂ.** ಅವರು ಬೆಂಗಳೂರು ದಕ್ಷಿಣ ತಾಲ್ಲೂಕಿನ ಕೆಂಬತ್ತಳ್ಳಿ ಸರ್ವೆ ನಂ.85 ನೆಲ್ಲೂ ರೆಡ್ಡಿ ಕ್ವಾರಿ ಪ್ರದೇಶದಲ್ಲಿ ಅನಧಿಕೃತ ಜೈವಿಕ ತ್ಯಾಜ್ಯದ ವಿಲೇವಾರಿಯಿಂದ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

03. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಕನ್ನಡ ಭಾಷಾ ಪರೀಕ್ಷೆಯನ್ನು ಕಡ್ಡಾಯಗೊಳಿಸುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

04. **ಶ್ರೀ ಅರವಿಂದ ಕುಮಾರ್ ಅರಳಿ** ಅವರು ರಾಜ್ಯದ ಕಾರ್ಮಿಕರಿಗೆ ಕನಿಷ್ಠ ವೇತನ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

..2..

೦5. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ಆಯನೂರು ಮಂಜುನಾಥ್ ಮತ್ತು ಶಶೀಲ್ ಜಿ. ನಮೋಶಿ** ಅವರುಗಳು ಪ್ರೌಢ ಶಾಲಾ ವೃಂದ ಮತ್ತು ನೇಮಕಾತಿ ನಿಯಮ 2016ರ ಪ್ರಕಾರ ಹಿಂದಿ ಪ್ರಚಾರ ಸಭಾಗಳಿಂದ ಹಿಂದಿ ಬಿ.ಎಡ್ ಪದವಿ ಪಡೆದ ವಿದ್ಯಾರ್ಥಿಗಳು ಹಿಂದಿ ಶಿಕ್ಷಕರ ನೇಮಕಾತಿಗೆ ಅರ್ಜಿ ಸಲ್ಲಿಸಲು ಅನರ್ಹರಾಗಿರುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

## 03. ನಿಯಮ 330ರ ಮೇರೆಗೆ

೦1. **ಶ್ರೀ ಪುಟ್ಟಣ್ಣ** ಅವರು ಖಾಸಗಿ ಅನುದಾನಿತ/ ಅನುದಾನರಹಿತ ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ನವೀಕರಣ ನಿಯಮಗಳನ್ನು ಸರಳೀಕರಣಗೊಳಿಸುವ ಕುರಿತು ಪ್ರಸ್ತಾಪಿಸುವುದು.

೦2. **ಡಾ. ವೈ.ಎ. ನಾರಾಯಣಸ್ವಾಮಿ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು,** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂಬಂಧಿಸಿದಂತೆ ವಿವಿಧ ನ್ಯಾಯಾಲಯಗಳಲ್ಲಿ ನಡೆಸುತ್ತಿರುವ ದಾವೆಗಳಿಗೆ ವಕೀಲರನ್ನು ನೇಮಿಸುವ ಪ್ರಕ್ರಿಯೆ ಕುರಿತು ಪ್ರಸ್ತಾಪಿಸುವುದು.

೦3. **ಡಾ. ತೇಜಸ್ವಿನಿಗೌಡ** ಅವರು ಬೆಂಗಳೂರಿನ ಸೆಂಚುರಿ ಕ್ಲಬ್ಬನ್ನು ಪಾರ್ಕ್‌ಜೋನ್‌ನಿಂದ ಹೊರತುಪಡಿಸದಿರುವುದರಿಂದ ಕ್ಲಬ್‌ನ ಅಭಿವೃದ್ಧಿ, ಪುನಶ್ಚೇತನ ಹಾಗೂ ನವೀಕರಣಕ್ಕೆ ಅಡಚಣೆ ಉಂಟಾಗಿರುವುದರ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀಯುತರುಗಳಾದ ಎನ್.ರವಿಕುಮಾರ್, ಯು.ಬಿ. ವೆಂಕಟೇಶ್, ದಿನೇಶ್ ಗೂಳಿಗೌಡ ಹಾಗೂ ಡಿ.ಎಸ್.ಅರುಣ್** ಅವರುಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ನಡೆಯುತ್ತಿರುವ ಅಕ್ರಮಗಳ ಕುರಿತು ಪ್ರಸ್ತಾಪಿಸುವುದು.

೦5 **ಶ್ರೀಯುತರುಗಳಾದ ಡಾ. ವೈ.ಎ. ನಾರಾಯಣಸ್ವಾಮಿ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು, ಅರುಣ ಶಹಾಪುರ, ಕೆ.ಟಿ. ಶ್ರೀಕಂಠೇಗೌಡ, ಶಶೀಲ್ ಜಿ. ನಮೋಶಿ, ಎಸ್.ವ್ಹಿ. ಸಂಕನೂರ, ಎಸ್.ಎಲ್. ಭೋಜೇಗೌಡ ಹಾಗೂ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳು ಅನುದಾನಿತ ಸಂಸ್ಥೆಗಳ ಶಿಕ್ಷಕ ಹಾಗೂ ಸಿಬ್ಬಂದಿ ವರ್ಗದವರಿಗೆ ಸೇವೆಗೆ ಸೇರಿದ ದಿನಾಂಕದಿಂದಲೇ ಸೇವಾ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦6. **ಡಾ: ಕೆ.ಗೋವಿಂದರಾಜು** ಅವರು ರಾಜ್ಯದ ಕ್ರೀಡಾಪಟುಗಳ ಸರ್ವತೋಮುಖ ಬೆಳವಣಿಗೆಗಾಗಿ ಪ್ರತಿ ಸಾಲಿನ ಆಯವ್ಯಯದಲ್ಲಿ ಹೆಚ್ಚಿನ ಅನುದಾನ ನೀಡುವುದು ಹಾಗೂ ವಲಯವಾರು ಮಟ್ಟದಲ್ಲಿ ಹೆಚ್ಚಿನ ಅನುದಾನ ಒದಗಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**